**ಕರ್ನಾಟಕ ಸರ್ಕಾರ**

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.875/2018**

ಪಿ.ಡಬ್ಲ್ಯೂ: 1

ಸಿ.ಡಬ್ಲ್ಯೂ: 1

| | | |
|---|---|---|
| ಸಾಕ್ಷಿದಾರರ **ಹೆಸರು** | : | ರಂಜಿತ |
| ಗಂಡನ **ಹೆಸರು** | : | ರಾಮ್ ರಾಜ್ |
| **ವಯಸ್ಸು** | : | **31 ವರ್ಷ** |
| **ಉದ್ಯೋಗ** | : | ಗೃಹಿಣಿ |
| **ವಾಸಸ್ಥಳ** | : | ಕುಂದೂರು ಗ್ರಾಮ |

**ದಿನಾಂಕ: 03-03-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ :** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ನ್ಯಾಯಾಲಯದ ಮುಂದೆ ಹಾಜರಿರುವ ಆರೋಪಿತರು ನಮ್ಮ ಸಂಬಂಧಿಕರು. ಆರೋಪಿಗಳು ನನಗೆ ಯಾವುದೇ ಅವಾಚ್ಯ ಶಬ್ದಗಳಿಂದ ಬೈದು ಅವಮಾನ ಮಾಡಿರುವುದಿಲ್ಲ, ನಮ್ಮ ಮನೆಯ ಒಳಗೆ ನುಗ್ಗಿ ನನ್ನ ಮೇಲೆ ಯಾವುದೇ ಹಲ್ಲೆ ಮಾಡಿರುವುದಿಲ್ಲ ಹಾಗೂ ಯಾವುದೇ ರೀತಿಯ ಕೊಲೆ ಬೆದರಿಕೆ ಹಾಕಿರುವುದಿಲ್ಲ. ಆರೋಪಿಗಳಿಂದ ನನಗೆ ಯಾವುದೇ ರೀತಿಯ ತೊಂದರೆಯಾಗಿರುವುದಿಲ್ಲ. ನಾನು ಈ ಪ್ರಕರಣದ ಸಂಬಂಧ ಯಾವುದೇ ಆಸ್ಪತ್ರೆಯಲ್ಲಿ ಚಿಕಿತ್ಸೆಯನ್ನು ಪಡೆದುಕೊಂಡಿರುವುದಿಲ್ಲ. ಈ ಪ್ರಕರಣದ ಸಂಬಂಧ ಬೇರೆ ಏನೂ ಗೊತ್ತಿರುವುದಿಲ್ಲ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ದೂರು ಆಗಿದ್ದು, ಸದರಿ ದಾಖಲಾತಿಯನ್ನು ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಮತ್ತೊಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸ್ಥಳ ಮತ್ತು ಅಮಾನತ್ತು ಮಹಜರ್ ಆಗಿದ್ದು, ಸದರಿ ದಾಖಲಾತಿಯನ್ನು ನಿಪಿ-2 ಎಂದು, ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಒಂದು ಛಾಯಚಿತ್ರವನ್ನು ತೋರಿಸಲಾಗಿದ್ದು, ಅದರಲ್ಲಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-3 ಎಂದು ಗುರುತಿಸಲಾಯಿತು.

( ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ದಿನಾಂಕಃ **27-05-2018** ರಂದು ಮಧ್ಯಾಹ್ನ **1-00** ಗಂಟೆ ಸಮಯದಲ್ಲಿ ನನ್ನ ಗಂಡನಾದ ರಾಮ್ ರಾಜ್ ರವರ ಅಂತ್ಯಕ್ರಿಯೆಯನ್ನು ಮುಗಿಸಿಕೊಂಡು ಮನೆಗೆ ಬಂದಾಗ ಆರೋಪಿತರು ಅಕ್ರಮ ಕೂಟ ಕಟ್ಟಿಕೊಂಡು ಮನೆಗೆ ಅತೀಕ್ರಮ ಪ್ರವೇಶ ಮಾಡಿ ನನಗೂ ಹಾಗೂ ಚಾಸಾ-**2** ರಿಂದ **4** ರವರಿಗೆ ಅವಾಚ್ಯ ಶಬ್ದಗಳಿಂದ ಬೈದು ಅವಮಾನ ಮಾಡಿರುತ್ತಾರೆಂದರೆ ಸರಿಯಲ್ಲ. ಆರೋಪಿತರು ನನಗೂ ಹಾಗೂ ಚಾಸಾ-**2** ರಿಂದ **4** ರವರಿಗೆ ಕೈಗಳಿಂದ ಹೊಡೆದು ನೋವುಂಟು ಮಾಡಿರುತ್ತಾರೆಂದರೆ ಸರಿಯಲ್ಲ. **5** ರಿಂದ **7**ನೇ ಆರೋಪಿತರು ಚಾಸಾ-**2** ರಿಂದ **4** ರವರಿಗೆ ಕೈಗಳಿಂದ ಹೊಡೆದು ಬಟ್ಟೆಯನ್ನು ಹಿಡಿದು ಎಳೆದಾಡಿ ಹರಿದು ಹಾಕಿ ಸಾಮಾನ್ಯ ಸ್ವರೂಪದ ಗಾಯವುಂಟು ಮಾಡಿರುತ್ತಾರೆಂದರೆ ಸರಿಯಲ್ಲ. ಆರೋಪಿತರು ನನಗೂ ಹಾಗೂ ಚಾಸಾ-**2** ರಿಂದ **4** ರವರಿಗೆ ನಿಮ್ಮನ್ನು ಬಿಡುವುದಿಲ್ಲ ಎಂದು ಕೊಲೆ ಬೆದರಿಕೆ ಹಾಕಿರುತ್ತಾರೆಂದರೆ ಸರಿಯಲ್ಲ. ಈ ಪ್ರಕರಣದ ಸಂಬಂಧ ನಾನು ಪೊಲೀಸ್ ಠಾಣೆಯಲ್ಲಿ ದೂರನ್ನು ನೀಡಿದ್ದು, ದೂರಿನಲ್ಲಿ ಬರೆದಿರುವ ವಿಚಾರ ನನಗೆ ತಿಳಿದಿರುವುದಿಲ್ಲ.

ದಿಃ **29-05-2018** ರಂದು ಪೊಲೀಸರು ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿ ಮಹಜರ್ ಕ್ರಮ ಜರುಗಿಸಿದ್ದು, ಅದರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ ಎಂದು ನುಡಿದಿರುತ್ತಾರೆ.

ಸಾಕ್ಷಿಯು ನ್ಯಾಯಾಲಯದ ಮುಂದಿರುವ ಹಸಿರುಬಣ್ಣದ ನೈಟಿ ಮತ್ತು ಒಂದು ಕಪ್ಪು ಬಣ್ಣದ ಹೂವಿನ ಚಿತ್ರ ಇರುವ ಚೂಡಿದಾರ್ ನ್ನು ಸಾಕ್ಷಿ ನೋಡಿ ಗುರುತಿಸಿರುವುದಿಲ್ಲ.

ನಾನು ಮತ್ತು ಆರೋಪಿತರು ಈ ಪ್ರಕರಣವನ್ನು ರಾಜಿ ಮಾಡಿಕೊಂಡಿದ್ದೇವೆ ಎಂದರೆ ಸರಿ. ನಾನು ಮತ್ತು ಆರೋಪಿತರು ಈ ಪ್ರಕರಣವನ್ನು ರಾಜಿ ಮಾಡಿಕೊಂಡ ಕಾರಣ ಆರೋಪಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**<u>ಪಾಟೀ ಸವಾಲು ಃ ಆರೋಪಿ ಪರ ವಕೀಲರಿಂದ.</u>**

ಪಾಟೀ ಸವಾಲು ಇರುವುದಿಲ್ಲ

**<u>ಮರುವಿಚಾರಣೆ</u>ಃ** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

ಓ. ಕೇ. ಸ. ಇ. ಎ. ಒ.

ಸಹಿ/-

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು

**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**